ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿಗಳು

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE : 23/12/2019

# ಸಂಕ್ರಾಂತಿ ಬಳಿಕ ಸಂಪುಟ ವಿಸ್ತರಣೆ

ಪ್ರಜಾವಾಣಿ ವಾರ್ತೆ

23-12-19

ಬೆಂಗಳೂರು: ಸಚಿವ ಸಂಪುಟ ವಿಸ್ತರಣೆ ಸಂಕ್ರಾಂತಿಯ ಬಳಿಕವೇ ನಡೆಯುವ ಸಾಧ್ಯತೆ ಇದೆ ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ನೂತನ ಶಾಸಕರಿಗೆ ತಿಳಿಸಿದ್ದಾರೆ.



ವಿಧಾನಸೌಧದಲ್ಲಿ ನೂತನ ಶಾಸಕರ ಪ್ರಮಾಣ ವಚನ ಸ್ವೀಕಾರದ ಸಂದರ್ಭದಲ್ಲಿ ಸಚಿವಾಕಾಂಕ್ಷಿ ಶಾಸಕರಿಗೆ ಈ ಮಾಹಿತಿ ನೀಡಿದರು ಎಂದು ಮೂಲಗಳು ಹೇಳಿವೆ.

'ಪೌರತ್ವ (ತಿದ್ದುಪಡಿ) ಕಾಯ್ದೆಯಿಂದ ದೇಶಾದ್ಯಂತ ಪ್ರತಿಭಟನೆ ನಡೆಯುತ್ತಿರುವುದೂ ಸೇರಿದಂತೆ ಹಲವು ಕಾರಣಗಳಿಗೆ ಈ ತಿಂಗಳ ಕೊನೆಯಲ್ಲಿ ದೆಹಲಿಗೆ ಬರುವಂತೆ ವರಿಷ್ಠರು ಸೂಚನೆ ನೀಡಿದ್ದಾರೆ. ವರಿಷ್ಠರ ಅನುಮತಿ ಪಡೆಯದೆ ಯಾವುದೇ ಹೆಜ್ಜೆ ಇಡುವುದಿಲ್ಲ. ಭರವಸೆ ನೀಡಿರುವಂತೆ ಎಲ್ಲರಿಗೂ ಸಚಿವ ಸ್ಥಾನ ನೀಡಲಾಗುವುದು' ಎಂದರು.

'ಸಂಪುಟ ವಿಸ್ತರಣೆ ತಡವಾಗಿರುವುದರಿಂದ ಯಾವುದೇ ವದಂತಿಗಳಿಗೂ ಕಿವಿಗೊಡಬೇಡಿ. ನಿಜಾಂಶ ನಿಮಗೂ ಗೊತ್ತಿದೆ, ಆದ್ದರಿಂದ ತಾಳ್ಮೆಯಿಂದ ಇರಿ' ಎಂದು ಯಡಿಯೂರಪ್ಪ ಹೇಳಿದರು.